# ಕರ್ನಾಟಕಸರ್ಕಾರ

ಸಂಖ್ಯೆ: ವೈಎಸ್‌ಡಿ-ಇಪಿಇ/256/2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20.08.2022.

## ಜಂಟಿ ಸುತ್ತೋಲೆ

ವಿಷಯ: ಕಬಡ್ಡಿ, ಖೋಖೋ, ಕುಸ್ತಿ ಮತ್ತು ಎತ್ತಿನ ಗಾಡಿ ಕ್ರೀಡೆಗಳಿಗೆ ಗ್ರಾಮೀಣ ಕೂಟವನ್ನು ಆಯೋಜಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ವೈಎಸ್‌ಡಿ-ಇಪಿಇ/192/2022, ದಿನಾಂಕ: 20.08.2022.
2. ಸುತ್ತೋಲೆ ಸಂಖ್ಯೆ: ಗ್ರಾಅಪ/793/ಗ್ರಾಪಂಅ/2015, ದಿನಾಂಕ: 05-02-2016.

****

ಮಾನ್ಯ ಮುಖ್ಯ ಮಂತ್ರಿಯವರು ಗ್ರಾಮೀಣ ಕ್ರೀಡಾಕೂಟವನ್ನು ಉತ್ತೇಜಿಸುವ ಸಲುವಾಗಿ ಪ್ರಮುಖವಾಗಿ ಕಬಡ್ಡಿ, ಖೋಖೋ, ಕುಸ್ತಿ ಮತ್ತು ಎತ್ತಿನಗಾಡಿ ಸ್ಪರ್ಧೆಗಳನ್ನೊಳಗೊಂಡ ಕ್ರೀಡಾಕೂಟವನ್ನು ಆಯೋಜಿಸುವಂತೆ ನಿರ್ದೇಶಿಸಿರುತ್ತಾರೆ.

ಈ ಹಿನ್ನಲೆಯಲ್ಲಿ, ಗ್ರಾಮ ಪಂಚಾಯಿತಿ, ತಾಲ್ಲೂಕು, ಜಿಲ್ಲೆ ಹಾಗೂ ರಾಜ್ಯ ಮಟ್ಟದಲ್ಲಿ ಕಬಡ್ಡಿ, ಖೋ-ಖೋ, ಕುಸ್ತಿ ಮತ್ತು ಎತ್ತಿನಗಾಡಿ ಕ್ರೀಡೆಗಳ ಗ್ರಾಮೀಣ ಕ್ರೀಡಾಕೂಟವನ್ನು ಆಯೋಜಿಸಲು ಉಲ್ಲೇಖಿತ ಆದೇಶದಲ್ಲಿ ಅನುಮೋದನೆ ನೀಡಲಾಗಿದೆ.

ಸದರಿ ಕ್ರೀಡಾಕೂಟವನ್ನು ಆಯೋಜಿಸುವಾಗ, ಕೆಳಗಿನ ಅಂಶಗಳನ್ನು ಕೇಂದ್ರೀಕರಿಸಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕ್ರಮಕೈಗೊಳ್ಳುವುದು :-

1. ಈ ಕ್ರೀಡಾಕೂಟದ ಆಯೋಜನೆಗೆ ಅಗತ್ಯವಿರುವ ತಾಂತ್ರಿಕ ನೆರವನ್ನು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ನೀಡುವುದು.
2. ಪ್ರಸಕ್ತ ಸಾಲಿನಲ್ಲಿ ಕಬ್ಬಡಿ, ಖೋ-ಖೋ, ಕುಸ್ತಿ ಮತ್ತು ಎತ್ತಿನಗಾಡಿ ಕ್ರೀಡೆಗಳಿಗೆ ಗ್ರಾಮೀಣ ಕ್ರೀಡಾಕೂಟವನ್ನು ಗ್ರಾಮ ಪಂಚಾಯಿತಿ, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಆಯೋಜಿಸಬಹುದಾಗಿದೆ.
3. ಇವು ವಯೋಮಿತಿ ಇಲ್ಲದ ಮುಕ್ತ ಪಂದ್ಯಾವಳಿ.
4. ಪ್ರತೀ ಗ್ರಾಮ ಪಂಚಾಯತ್ ಮಟ್ಟದ ಕ್ರೀಡಾ ಕೂಟದ ಸಂಘಟನೆಗೆ ಗ್ರಾಮ ಪಂಚಾಯತ್ ನ ಸ್ವಂತ ಆದಾಯದ ಶೇ.2 ರಷ್ಟು ಅನುದಾನದಿಂದ (ಉಲ್ಲೇಖ-2ರ ಸುತ್ತೋಲೆ) ಭರಿಸುವುದು.

5. ತಾಲ್ಲೂಕು ಮಟ್ಟ ಮತ್ತು ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಜಿಲ್ಲಾ ಪಂಚಾಯತ್ ಲೆಕ್ಕಶೀರ್ಷಿಕೆ: 2205-00-104-0-26 ಕ್ರೀಡಾಕೂಟ ಮತ್ತು ರಾಲಿ ಸಂಘಟನೆ ಹಾಗೂ ಯುವ, ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ ಅಡಿಯಲ್ಲಿ ಒದಗಿಸಿದ ಅನುದಾನದಲ್ಲಿ ಆಯೋಜಿಸುವುದು.

6. ತಾಲ್ಲೂಕು ಮಟ್ಟದ ವಿಜೇತ ಕ್ರೀಡಾಪಟುಗಳಿಗೆ ಬಹುಮಾನದ ಮೊತ್ತವನ್ನು ಕೇಂದ್ರ ಕಚೇರಿಯಿಂದ ನೀಡುವುದು.

7. ಜಿಲ್ಲಾ ಮಟ್ಟದ ವಿಜೇತ ಕ್ರೀಡಾಪಟುಗಳಿಗೆ ಬಹುಮಾನದ ಮೊತ್ತವನ್ನು ಕೇಂದ್ರ ಕಚೇರಿಯಿಂದ ನೀಡುವುದು.

8. ಮೂರು ಅಥವಾ ಅದಕ್ಕಿಂತ ಕಡಿಮೆ ತಾಲ್ಲೂಕುಗಳಿರುವ ಜಿಲ್ಲೆಗಳಲ್ಲಿ 1,2 ಮತ್ತು 3ನೇ ಸ್ಥಾನ ಪಡೆದವರಿಗೆ ಮಾತ್ರ ಜಿಲ್ಲಾ ಮಟ್ಟದಲ್ಲಿ ಅವಕಾಶ.

9. ನಾಲ್ಕು ಅಥವಾ ಐದು ತಾಲ್ಲೂಕುಗಳಿರುವ ಜಿಲ್ಲೆಗಳಲ್ಲಿ 1 ಮತ್ತು 2ನೇ ಸ್ಥಾನ ಪಡೆದವರಿಗೆ ಮಾತ್ರ ಜಿಲ್ಲಾ ಮಟ್ಟದಲ್ಲಿ ಅವಕಾಶ. ಹಾಗೆಯೇ, ಆರು ಮತ್ತು ಅದಕ್ಕಿಂತ ಹೆಚ್ಚಿನ ತಾಲ್ಲೂಕುಗಳಿರುವ ಜಿಲ್ಲೆಗಳಲ್ಲಿ 1ನೇ ಸ್ಥಾನ ಪಡೆದವರಿಗೆ ಮಾತ್ರ ಜಿಲ್ಲಾಮಟ್ಟದಲ್ಲಿ ಅವಕಾಶ.

10. ತಾಲ್ಲೂಕು ಮಟ್ಟದ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ತಲಾ ರೂ. 200 ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ತಲಾ ರೂ.250 ಮತ್ತು ರಾಜ್ಯ ಮಟ್ಟದ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಕ್ರೀಡಾ ಪಟುಗಳಿಗೆ ತಲಾ ರೂ.300 ರಂತೆ ಬೆಳಗಿನ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿ ಊಟ ಒದಗಿಸುವುದು.

11. ಜಿಲ್ಲಾ ಮಟ್ಟದಲ್ಲಿ ಮೊದಲ ಸ್ಥಾನ ಪಡೆದವರಿಗೆ ಮಾತ್ರ ರಾಜ್ಯ ಮಟ್ಟದಲ್ಲಿ ಭಾಗವಹಿಸಲು ಅವಕಾಶ.

ಗ್ರಾಮೀಣ ಕ್ರೀಡೋತ್ಸವವನ್ನು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಯಶಸ್ವಿಯಾಗಿ ನಡೆಯುವುದನ್ನು ಆಯಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ-ಗಳು ಖಾತರಿಪಡಿಸಿಕೊಳ್ಳತಕ್ಕದ್ದು.

(ಎಲ್.ಕೆ. ಅತೀಕ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಇಲಾಖೆ.

(ಡಾ: ಶಾಲಿನಿ ರಜನೀಶ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು
ಕ್ರೀಡಾ ಇಲಾಖೆ.

**ಇವರಿಗೆ :**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳು.
4. ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ :</u>

1. ಮಾನ್ಯ ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ / ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.